ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT: ಶಿಕ್ಷಣ
ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ
ದಿನಾಂಕ : DATE : 20-12-20

# ಹೊಸ ವರ್ಷಕ್ಕೆ ಶಾಲೆ

ಉ.ವಾ. 20-12-20

## ಜ.1ರಿಂದ ಎಸ್ಸೆಸ್ಸೆಲ್ಸಿ, ದ್ವಿತೀಯ ಪಿಯುಸಿ ತರಗತಿ ಆರಂಭಕ್ಕೆ ನಿರ್ಧಾರ

## ಕೊರೊನಾ ಪರೀಕ್ಷೆ ಕಡ್ಡಾಯವಲ್ಲ । ಶಾಲೆಗೆ ಬರಲೇಬೇಕು ಅಂತೇನಿಲ್ಲ

**ಬೆಂಗಳೂರು:** ಕೊರೊನಾ ಕಾರಣದಿಂದಾಗಿ ಕಳೆದ 10 ತಿಂಗಳಿಂದ ಸ್ಥಗಿತಗೊಂಡಿದ್ದ ಶೈಕ್ಷಣಿಕ ತರಗತಿಗಳು ಹೊಸ ವರ್ಷದ ಮೊದಲ ದಿನದಿಂದಲೇ ಆರಂಭವಾಗಲಿವೆ. ಎಸ್ಸೆಸ್ಸೆಲ್ಸಿ ಮತ್ತು ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ತರಗತಿ ಆರಂಭವಾಗಲಿದೆ. ಹಾಗೆಯೇ ಈಗಾಗಲೇ ಘೋಷಿಸಿರುವಂತೆ 6ರಿಂದ 9ನೇ ತರಗತಿ ವಿದ್ಯಾರ್ಥಿಗಳಿಗೂ ಅಂದಿನಿಂದಲೇ ವಿದ್ಯಾಗಮ ಶುರುವಾಗಲಿದೆ.

ಈ ಸಂಬಂಧ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ನೇತೃತ್ವದಲ್ಲಿ ಗೃಹ ಕಚೇರಿ ಕೃಷ್ಣಾದಲ್ಲಿ ನಡೆದ ಸಚಿವರು ಹಾಗೂ ಅಧಿಕಾರಿಗಳ ಸಭೆಯಲ್ಲಿ ನಿರ್ಧಾರ ತೆಗೆದುಕೊಳ್ಳಲಾಗಿದೆ.



ವಿದ್ಯಾರ್ಥಿಗಳಿಗೆ ಕೊರೊನಾ ಪರೀಕ್ಷೆ ಕಡ್ಡಾಯವಿಲ್ಲ, ಆದರೆ, ಪಾಲಕರಿಂದ ಅನುಮತಿ ಪತ್ರದ ಜತೆಗೆ ಕೊರೊನಾ ಲಕ್ಷಣಗಳು ಇಲ್ಲ ಎಂಬ ಖಾತರಿಪತ್ರವನ್ನು ಶಾಲೆಗೆ ನೀಡಬೇಕು ಎಂದು ಸೂಚಿಸಲಾಗಿದೆ. ಶಾಲಾ ತರಗತಿ ಹಾಗೂ ವಿದ್ಯಾಗಮ ಕಾರ್ಯಕ್ರಮ ಹೇಗೆ ನಡೆಯಬೇಕು ಎಂಬುದಕ್ಕೆ ಪ್ರಮಾಣಿತ ಕಾರ್ಯಾಚರಣಾ ವಿಧಾನ(ಎಸ್‌ಒಪಿ)ವನ್ನು ಬಿಡುಗಡೆ ಮಾಡಿದೆ.

**ಕಡ್ಡಾಯವಲ್ಲ:** ಎಸ್ಸೆಸ್ಸೆಲ್ಸಿ ಅಥವಾ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಜ.1ರಿಂದ ತರಗತಿಗಳು ಆರಂಭವಾಗುತ್ತಿದ್ದರೂ, ಶಾಲೆಗೆ ವಿದ್ಯಾರ್ಥಿಗಳು ಬರಲೇಬೇಕು ಎಂದು ಯಾರೂ ಕೂಡ ಒತ್ತಡ ಹೇರುವಂತಿಲ್ಲ. ಆನ್‌ಲೈನ್‌ಗೂ ಅವಕಾಶ ನೀಡಬೇಕು. ಆದರೆ, ಸಮಾಜ ಕಲ್ಯಾಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಯ ವಸತಿ ಶಾಲೆಗಳಲ್ಲಿ ಹಾಗೂ ವಿದ್ಯಾರ್ಥಿ ನಿಲಯಗಳಲ್ಲಿರುವ ವಿದ್ಯಾರ್ಥಿಗಳು, ಪ್ರವೇಶ ಪಡೆಯುವ 72 ಗಂಟೆಗಳ ಅಂತರದಲ್ಲಿ ಕೋವಿಡ್-19 ರ ಪರೀಕ್ಷೆ ಮಾಡಿಸಿ, ನೆಗೆಟಿವ್ ವರದಿಯನ್ನು ಕಡ್ಡಾಯವಾಗಿ ಸಲ್ಲಿಸಬೇಕು ಎಂದು ಸರ್ಕಾರ ಸ್ಪಷ್ಟಪಡಿಸಿದೆ.

**1ರಿಂದ 5ನೇ ತರಗತಿಗೂ ವಿದ್ಯಾಗಮ:** ಜ.1ರಿಂದ 6ರಿಂದ 9ನೇ ತರಗತಿಗಳಿಗೆ ವಿದ್ಯಾಗಮ ತರಗತಿಗಳೂ ಪುನಾರಂಭವಾಗಲಿವೆ. 10 ಮತ್ತು 12ನೇ ತರಗತಿಗಳ ಆರಂಭದ ಅನುಭವದ ಆಧಾರದಲ್ಲಿ ಜ.15ರಿಂದ 11ನೇ ತರಗತಿ ಆರಂಭಿಸಲಾಗುತ್ತದೆ.

▶ 7ನೇ ಪುಟಕ್ಕೆ

### ಶಾಲೆಯಲ್ಲೊಂದು ಐಸೋಲೇಷನ್ ಕೊಠಡಿ

ಆರೋಗ್ಯ ತೊಂದರೆ ಇಲ್ಲವೇ ಶೀತ, ನೆಗಡಿ, ಕೆಮ್ಮು ಹಾಗೆಯೇ ಕೋವಿಡ್ ಲಕ್ಷಣಗಳಿರುವ ಮಕ್ಕಳು ಶಾಲೆಗೆ ಬರುವಂತಿಲ್ಲ, ಅಂತಹ ವಿದ್ಯಾರ್ಥಿಗಳಿಗೆ ಪ್ರತಿ ಶಾಲೆಯಲ್ಲೂ ಒಂದೊಂದು ಐಸೋಲೇಷನ್ ರೂಂ ವ್ಯವಸ್ಥೆ ಮಾಡುತ್ತೇವೆ. ಅಲ್ಲಿ ದಿಢೀರ್ ಅಸ್ವಸ್ಥ ಮಕ್ಕಳಿಗೆ ವ್ಯವಸ್ಥೆ ಮಾಡಲಾಗುತ್ತದೆ. ನಂತರ ಕೊರೊನಾ ಪರೀಕ್ಷೆ ಇತ್ಯಾದಿಗಳ ವ್ಯವಸ್ಥೆಯಾಗಲಿದೆ ಎಂದು ಸಚಿವರು ತಿಳಿಸಿದರು.

### ಶಾಲಾರಂಭಕ್ಕೂ ಮೊದಲು ಸಭೆ

ತರಗತಿಗಳಲ್ಲಿ ಶಿಕ್ಷಕರು ಕೋವಿಡ್ ಲಕ್ಷಣಗಳ ಕುರಿತು ವಿದ್ಯಾರ್ಥಿಗಳನ್ನು ಪ್ರತಿದಿನವೂ ಪರೀಕ್ಷೆಗೆ ಒಳಪಡಿಸಬೇಕು. ಕೋವಿಡ್ ಲಕ್ಷಣಗಳು ಕಂಡು ಬಂದರೆ ಅಂತಹ ವಿದ್ಯಾರ್ಥಿಯನ್ನು ಪರೀಕ್ಷೆ ಮತ್ತು ಸಮಾಲೋಚನೆಗೆ ಸಮೀಪದ ಆಸ್ಪತ್ರೆಗೆ ಕಳಿಸಬೇಕು. ಶಾಲಾರಂಭಕ್ಕೂ ಮುನ್ನ ಡಿಸೆಂಬರ್ ಮಾಸದಲ್ಲಿ ಶಾಲಾಡಳಿತಗಳು, ಶಾಲಾ ಮೇಲುಸ್ತುವಾರಿ ಸಮಿತಿಗಳು, ಪೋಷಕರು, ಮಕ್ಕಳು ಸೇರಿದಂತೆ ಶೈಕ್ಷಣಿಕ ಪಾಲುದಾರರ ಸಭೆ ನಡೆಸಿ ಶಾಲೆಗಳ ಪುನಾರಂಭ ಕುರಿತು ವಿಶ್ವಾಸ ಮೂಡಿಸುವ ಕ್ರಮ ಕೈಗೊಳ್ಳಲು ಸೂಚನೆ ನೀಡಿದ್ದಾರೆ.

> **ಕೊರೊನಾ ತಾಂತ್ರಿಕ ಸಲಹಾ ಸಮಿತಿ ಕೊಟ್ಟಿರುವ ಸಲಹೆ ಬಗ್ಗೆ ಸಮಾಲೋಚನೆ ಮಾಡಿ ಜ.1ರಿಂದ, 10 ಮತ್ತು 12ನೇ ತರಗತಿಯನ್ನು ಹಾಗೂ 6ರಿಂದ 9ನೇ ತರಗತಿ ವಿದ್ಯಾರ್ಥಿಗಳಿಗೆ ವಿದ್ಯಾಗಮ ನಡೆಸಲು ಒಪ್ಪಿಗೆ ನೀಡಿದ್ದೇವೆ.**
>
> • **ಬಿ.ಎಸ್.ಯಡಿಯೂರಪ್ಪ**, ಮುಖ್ಯಮಂತ್ರಿ

> **ವಿದ್ಯಾಗಮ ಈ ಬಾರಿ ಶಾಲಾವರಣದಲ್ಲಿ ನಡೆಯಲಿದೆ. ವಾರಕ್ಕೆ ಮೂರುದಿನ ವಿದ್ಯಾರ್ಥಿಗಳು ಬರಲು ಬೇಕಾದ ವ್ಯವಸ್ಥೆ ಮಾಡಿದ್ದೇವೆ. ಇದಕ್ಕೂ ಪಾಲಕ, ಪೋಷಕರ ಒಪ್ಪಿಗೆ ಪತ್ರ ಪಡೆದು ಶಾಲೆಗೆ ಬರಬೇಕಾಗಿದೆ.**
>
> • **ಸುರೇಶ್ ಕುಮಾರ್**, ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವ

### ಸಿಎಂ ಸಭೆಯ ತೀರ್ಮಾನಗಳು

- **ಶಾಲೆ-ಕಾಲೇಜುಗಳಲ್ಲಿ ತರಗತಿ ಕೊಠಡಿಗಳನ್ನು ಡಿಸ್-ಇನ್ಫೆಕ್ಷನ್ ಮಾಡಿಸುವ ಕುರಿತು ಮುನ್ನೆಚ್ಚರಿಕೆ ವಹಿಸಬೇಕು.**
- **ಅರ್ಧ ದಿನ ಮಾತ್ರ ತರಗತಿ. ಒಂದು ಕೊಠಡಿಯಲ್ಲಿ ಗರಿಷ್ಠ 15 ವಿದ್ಯಾರ್ಥಿಗಳು**
- **ಬಿಸಿಯೂಟ ವಿತರಣೆ ಇರುವುದಿಲ್ಲ, ಬದಲಿಗೆ ಆಹಾರ ಧಾನ್ಯ ವಿತರಣೆ ಮುಂದುವರಿಕೆ**
- **ಶಿಕ್ಷಣ ಇಲಾಖೆ ಹೊರಡಿಸಿರುವ ಮಾರ್ಗಸೂಚಿಗಳ ಪಾಲಿಸುವುದು ಕಡ್ಡಾಯ**
- **ವಿದ್ಯಾಗಮ ಕಾರ್ಯಕ್ರಮದಡಿ ವಿದ್ಯಾರ್ಥಿಗಳು ವಾರಕ್ಕೆ ಎರಡು ಬಾರಿ ಶಾಲೆಗೆ ಹಾಜರಾಗಬೇಕು.**
- **ಖಾಸಗಿ ಶಾಲಾಡಳಿತ ಮಂಡಳಿಗಳು ವಿದ್ಯಾಗಮ ನಡೆಸಬಹುದು.**

# ಹೊಸ ವರ್ಷಕ್ಕೆ ಶಾಲೆ

**1ನೇ ಪುಟದಿಂದ** ▶ ಜ.14ರಿಂದ 1ರಿಂದ 5ನೇ ತರಗತಿಗಳಿಗೆ ವಿದ್ಯಾಗಮ ವಿಸ್ತರಿಸಲಾಗುತ್ತದೆ. ಪ್ರಮಾಣಿತ ಕಾರ್ಯಾಚರಣೆ ವಿಧಾನ(ಎಸ್‌ಒಪಿ) ಕೂಡ ಬಿಡುಗಡೆ ಮಾಡಿದ್ದೇವೆ. ಹಾಗೆಯೇ ವಿದ್ಯಾಗಮ ಮತ್ತು ತರಗತಿಗಳು ಆರಂಭವಾಗುತ್ತಿದ್ದರೂ ಬಿಸಿಯೂಟ ನೀಡುವುದಿಲ್ಲ. ಬದಲಿಗೆ ಆಹಾರ ಧಾನ್ಯ ವಿತರಿಸಲಿದ್ದೇವೆ ಎಂದು ಶಿಕ್ಷಣ ಸಚಿವ ಸುರೇಶ್ ಕುಮಾರ್ ಹೇಳಿದರು.

**ಪಠ್ಯ ಕ್ರಮ ನಿಗದಿ:** 10 ಮತ್ತು 12ನೇ ತರಗತಿಗಳಿಗೆ ವಾರ್ಷಿಕ ಪರೀಕ್ಷೆಗಳನ್ನು ನಡೆಸಬೇಕಾಗಿರುವುದರಿಂದ ಈಗಾಗಲೇ ಸಿದ್ಧತೆ ಆರಂಭಿಸಿದ್ದೇವೆ. ಪಿಯುಸಿ ಸಂಬಂಧ ಪಠ್ಯ ವಸ್ತುಗಳನ್ನು ಎನ್‌ಸಿಇಆರ್‌ಟಿ ಮಾರ್ಗದರ್ಶಿ ಸೂತ್ರಗಳನ್ವಯ ಕಡಿತ ಮಾಡಿದ್ದೇವೆ. ಎಸ್ಸೆಸ್ಸೆಲ್ಸಿ ಪಠ್ಯ ಕಡಿತ ಸಂಬಂಧ ಮುಂದೆ ಸಿಗಬಹುದಾದ ಶೈಕ್ಷಣಿಕ ದಿನಗಳ ಆಧಾರದಲ್ಲಿ ಮುಂದಿನ ವಾರದಲ್ಲಿ ನಿರ್ಧಾರ ತೆಗೆದುಕೊಳ್ಳುತ್ತೇವೆ ಎಂದು ಸುರೇಶ್ ಕುಮಾರ್ ಹೇಳಿದರು.

> **ಶಾಲಾರಂಭಕ್ಕೆ ಸಂಬಂಧಿಸಿದಂತೆ ಆರೋಗ್ಯ ಇಲಾಖೆಯಿಂದ ಎಲ್ಲ ರೀತಿಯ ಸಹಕಾರ ನೀಡುತ್ತೇವೆ. ಕೊರೊನಾ ತಾಂತ್ರಿಕ ಸಲಹಾ ಸಮಿತಿ ಎರಡನೇ ಅಲೆಯ ಎಚ್ಚರಿಕೆ ನೀಡಿದೆ. ಎರಡನೇ ಅಲೆ ಬಾರದಂತೆ ಮಾರ್ಗಸೂಚಿ ಕ್ರಮಗಳನ್ನು ಅನುಸರಿಸಿ, ಪ್ರಯತ್ನ ಮಾಡುತ್ತಿದ್ದೇವೆ.**
>
> » **ಡಾ.ಕೆ.ಸುಧಾಕರ್**, ಆರೋಗ್ಯ ಸಚಿವ